E, Gov



7. ಎಲ್ಲಾ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು.
8. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಕರ್ನಾಟಕ ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.
9. ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
10. ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
11. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
12. ಅಪರ ಪೊಲೀಸ್ ಮಹಾನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
14. ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬಹುಮಹಡಿ ಕಟ್ಟಡ, ಬೆಂಗಳೂರು.
15. ಎಲ್ಲಾ ಸರ್ಕಾರದ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು/ಶಾಖಾಧಿಕಾರಿಗಳು.
16. ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ.

**ಈ ಸುತ್ತೋಲೆಯು ಸರ್ಕಾರದ ಅಂತರ್ಜಾಲ http://www.karnataka.gov.in ಯಲ್ಲಿ ಲಭ್ಯವಿರುತ್ತದೆ.**

ಒಂಬರಹ ಸಂಖ್ಯೆ: ಡಿಟಿಇ 04 ಕಾಫ 2017/193 ದಿ:22-04-2017

ಸರ್ಕಾರಿ ನೌಕರರ ವಿರುದ್ಧ ಅಭಿಯೋಜನಾ ಮಂಜೂರಾತಿಯನ್ನು ನೀಡುವ ಬಗ್ಗೆ ಮೇಲ್ಕಂಡ ಸರ್ಕಾರದ ಮುಖ್ಯ ಕಾರ್ಯದರ್ಶಿ ಇವರ ಸುತ್ತೋಲೆ ದಿ: 23-03-2017 ರಲ್ಲಿ ನೀಡಿರುವ ಸೂಚನೆಯನ್ನು ಕಟ್ಟುನಿಟ್ಟಾಗಿ ಪರಿಪಾಲಿಸುವಂತೆ ತಿಳಿಸಿದೆ.

ನಿರ್ದೇಶಕರು

ಇವರಿಗೆ: (ಸೂಕ್ತ ಕ್ರಮಕ್ಕಾಗಿ)

(1) ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳು/ಸಿಬ್ಬಂದಿಗಳಿಗೆ

(2) ಪ್ರಾಚಾರ್ಯರು- ಎಲ್ಲಾ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳು/ಕಿರಿಯ ತಾಂತ್ರಿಕ ಶಾಲೆಗಳು ಹಾಗೂ ಚಿತ್ರಕಲಾ ಮಹಾವಿದ್ಯಾಲಯ

ಪ್ರತಿ :

(1) ಇಲಾಖೆಯ ವೆಬ್ ಸೈಟ್ ನಲ್ಲಿ ಪ್ರಕಟಿಸಲು ಇ-ಗೌರ್ನೆಸ್ ವಿಭಾಗಕ್ಕೆ

(2) ಕಛೇರಿ ಪ್ರತಿ

2. ಆದಾಗ್ಯೂ, ಅನೇಕ ಸಕ್ಷಮ ಪ್ರಾಧಿಕಾರಗಳು ಮಾನ್ಯ ಸರ್ವೋಚ್ಚ ನ್ಯಾಯಾಲಯವು ಮೇಲೆ ತಿಳಿಸಿರುವ ಪ್ರಕರಣದಲ್ಲಿ ಅಭಿಯೋಜನಾ ಮಂಜೂರಾತಿಯನ್ನು ನೀಡುವ ಬಗ್ಗೆ ವಿಧಿಸಿರುವ **3 ತಿಂಗಳ ಕಾಲಮಿತಿಯನ್ನು** ಕಟ್ಟುನಿಟ್ಟಾಗಿ ಪಾಲಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

3. ಪ್ರಸ್ತುತ, ಕ್ರಿಮಿನಲ್ ಅರ್ಜಿ ಸಂಖ್ಯೆ:2653/2015, ಡಾ:ವಿ.ಎಲ್. ನಂದೀಶ್ ವಿರುದ್ಧ ಕರ್ನಾಟಕ ಲೋಕಾಯುಕ್ತ ಮತ್ತು ಇತರರು ಪ್ರಕರಣದ ವಿಚಾರಣೆ ನಡೆಸುತ್ತಿರುವ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ಲೋಕಾಯುಕ್ತ ಪ್ರಕರಣಗಳಲ್ಲಿ ಸಕ್ಷಮ ಪ್ರಾಧಿಕಾರಗಳು ಅಭಿಯೋಜನಾ ಮಂಜೂರಾತಿ ಪ್ರಸ್ತಾವನೆಗಳನ್ನು ಮಾನ್ಯ ಸರ್ವೋಚ್ಚ ನ್ಯಾಯಾಲಯವು ವಿಧಿಸಿರುವ 3 ತಿಂಗಳ ಕಾಲಮಿತಿಯೊಳಗೆ ಇತ್ಯರ್ಥ ಪಡಿಸದಿರುವುದನ್ನು ತೀವ್ರವಾಗಿ ಪರಿಗಣಿಸಿದ್ದು, ದಿನಾಂಕ:09.03.2017ರಂದು ನೀಡಿರುವ ಮಧ್ಯಂತರ ಆದೇಶದಲ್ಲಿ, ಮಾನ್ಯ ಸರ್ವೋಚ್ಚ ನ್ಯಾಯಾಲಯವು ವಿಧಿಸಿರುವ ಕಾಲಮಿತಿಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಎಲ್ಲಾ ಸಕ್ಷಮ ಪ್ರಾಧಿಕಾರಿಗಳಿಗೆ ಸೂಚನೆಗಳನ್ನು ನೀಡುವಂತೆ ನಿರ್ದೇಶಿಸಿದೆ.

4. ಈ ಹಿನ್ನೆಲೆಯಲ್ಲಿ, ಸರ್ಕಾರಿ ನೌಕರರ ವಿರುದ್ಧ ನ್ಯಾಯಾಲಯದಲ್ಲಿ ಕಾನೂನು ಕ್ರಮ ಜರುಗಿಸಲು ಭ್ರಷ್ಟಾಚಾರ ತಡೆ ಅಧಿನಿಯಮ, 1988ರ ಪ್ರಕರಣ 19 ಮತ್ತು ದಂಡ ಪ್ರಕ್ರಿಯಾ ಸಂಹಿತೆ, 1973ರ ಪ್ರಕರಣ 197ರಡಿಯಲ್ಲಿ ಕ್ರಮ ಜರುಗಿಸಲು ಅಧಿಕಾರ ಹೊಂದಿರುವ ಎಲ್ಲಾ ಸಕ್ಷಮ ಪ್ರಾಧಿಕಾರಗಳು ಮಾನ್ಯ ಸರ್ವೋಚ್ಚ ನ್ಯಾಯಾಲಯವು ಮೇಲೆ ತಿಳಿಸಿರುವ ಪ್ರಕರಣದಲ್ಲಿ ಅಭಿಯೋಜನಾ ಮಂಜೂರಾತಿಯನ್ನು ನೀಡುವ ಬಗ್ಗೆ ವಿಧಿಸಿರುವ **3 ತಿಂಗಳ ಕಾಲಮಿತಿಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ** ಮತ್ತೊಮ್ಮೆ ಸೂಚಿಸಲಾಗಿದೆ.

ಎಸ್.ಸಿ. ಖುಂಟಿಆ
22/3/17
(ಡಾ: ಸುಭಾಷ್ ಚಂದ್ರ ಖುಂಟಿಆ)
ಸರ್ಕಾರದ ಮುಖ್ಯ ಕಾರ್ಯದರ್ಶಿ.

**ಪ್ರತಿಗಳು:**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
2. ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು-1/2, ವಿಧಾನಸೌಧ, ಬೆಂಗಳೂರು.
3. ಮಾನ್ಯ ರಾಜ್ಯಪಾಲರ ವಿಶೇಷ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
4. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ್, ಚಾಣಕ್ಯಪುರಿ, ನವದೆಹಲಿ-110 011.
5. ಎಲ್ಲಾ ಇಲಾಖಾ ಮುಖ್ಯಸ್ಥರು.
6. ಎಲ್ಲಾ ಪ್ರಾದೇಶಿಕ ಆಯುಕ್ತರು.

CM-999

51
11/4/17

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 2 ಏಪಿಎಸ್ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ:23.03.2017.

## ಸುತ್ತೋಲೆ

ವಿಷಯ: ಸರ್ಕಾರಿ ನೌಕರರ ವಿರುದ್ಧ ಅಭಿಯೋಜನಾ ಮಂಜೂರಾತಿ ನೀಡಲು ಅಧಿಕಾರ ಹೊಂದಿರುವ ಪ್ರಾಧಿಕಾರಗಳು ಕಾಲಮಿತಿ ಅನುಸರಿಸುವ ಬಗ್ಗೆ.

ಉಲ್ಲೇಖ:
1. ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ 2 ಸೇಇವಿ 98, ದಿನಾಂಕ: 16.07.1998.
2. ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ 3 ಸೇಇವಿ 2001, ದಿನಾಂಕ 24.03.2001.
3. ಸುತ್ತೋಲೆ ಸಂಖ್ಯೆ:ಸಿಆಸುಇ 31 ಸೇಇವಿ 2001, ದಿನಾಂಕ:24.08.2001.
4. ಸುತ್ತೋಲೆ ಸಂಖ್ಯೆ:ಸಿಆಸುಇ 43 ಸೇಇವಿ 2011, ದಿನಾಂಕ:26.09.2011.
5. ಅನಧಿಕೃತ ಟಿಪ್ಪಣಿ ಸಂಖ್ಯೆ:ಸಿಆಸುಇ 25 ಸೇಇವಿ 2015, ದಿನಾಂಕ: 17.07.2015.
6. ಸುತ್ತೋಲೆ ಸಂಖ್ಯೆ:ಸಿಆಸುಇ 50 ಸೇಇವಿ 2015, ದಿನಾಂಕ:28.07.2015.

*****

To
Sri Gopal Kr
JD (Ad) / Rg (Ad)
13/4

ಸರ್ಕಾರಿ ನೌಕರರ ವಿರುದ್ಧ ನ್ಯಾಯಾಲಯದಲ್ಲಿ ಕಾನೂನು ಕ್ರಮ ಜರುಗಿಸಲು ಭ್ರಷ್ಟಾಚಾರ ತಡೆ ಅಧಿನಿಯಮ, 1988ರ ಪ್ರಕರಣ 19 ಮತ್ತು ದಂಡ ಪ್ರಕ್ರಿಯಾ ಸಂಹಿತೆ, 1973ರ ಪ್ರಕರಣ 197ರಡಿಯಲ್ಲಿ ಕ್ರಮ ಜರುಗಿಸಲು ಅಧಿಕಾರ ಹೊಂದಿರುವ ಪ್ರಾಧಿಕಾರಗಳು ಸರ್ಕಾರಿ ನೌಕರರ ವಿರುದ್ಧ ಮೊಕದ್ದಮೆ ಹೂಡುವುದಕ್ಕೆ ಅನುಮತಿ ನೀಡುವ ಮುನ್ನ ತಮ್ಮ ಮುಂದೆ ಮಂಡಿಸಲಾದ ದಾಖಲೆಗಳನ್ನು ಪರಿಶೀಲಿಸಿದ ನಂತರ ಅವರ ವಿರುದ್ಧ ಮೊಕದ್ದಮೆ ಹೂಡಲು ಮೇಲ್ನೋಟಕ್ಕೆ ಸಾಕಷ್ಟು ಆಧಾರಗಳಿವೆಯೇ? ಎಂದು ಪರಿಶೀಲಿಸಿ, ಅಂತಹ ಅನುಮತಿ ನೀಡುವ ಬಗ್ಗೆ ತೀರ್ಮಾನಿಸಬೇಕೆಂದು ಹಾಗೂ ಮಾನ್ಯ ಸರ್ವೋಚ್ಚ ನ್ಯಾಯಾಲಯವು ರಿಟ್ ಅಪೀಲು(ಕ್ರಿಮಿನಲ್) ಸಂಖ್ಯೆ:340-343/93, ಶ್ರೀ ವಿನೀತ್ ನರೇನ್ ಮತ್ತು ಇತರರ ವಿರುದ್ಧ ಯೂನಿಯನ್ ಆಫ್ ಇಂಡಿಯಾ ಮತ್ತು ಇತರರ ಪ್ರಕರಣದಲ್ಲಿ ನೀಡಿರುವ ತೀರ್ಪಿನಲ್ಲಿ ವ್ಯಕ್ತಪಡಿಸಿರುವ ಕಾಲಮಿತಿಯೊಳಗೆ **(3 ತಿಂಗಳು ಮಾತ್ರ ಹಾಗೂ ಯಾವುದೇ ಕಾನೂನು ಅಧಿಕಾರಿಗಳನ್ನು ಸಂಪರ್ಕಿಸಬೇಕಾದಲ್ಲಿ ಮತ್ತೊಂದು ತಿಂಗಳ ಅವಧಿ ಮಾತ್ರ)** ಅಭಿಯೋಜನಾ ಮಂಜೂರಾತಿ ನೀಡುವ ಬಗ್ಗೆ ಅಂತಿಮ ನಿರ್ಣಯ ತೆಗೆದುಕೊಳ್ಳತಕ್ಕದ್ದೆಂದು ಉಲ್ಲೇಖದಲ್ಲಿ ತಿಳಿಸಿರುವ ಅಧಿಕೃತ ಜ್ಞಾಪನ ಮತ್ತು ಸುತ್ತೋಲೆಗಳಲ್ಲಿ ಈಗಾಗಲೇ ಸ್ಪಷ್ಟವಾದ ಸೂಚನೆಗಳನ್ನು ನೀಡಲಾಗಿದೆ.

30
13.4.17

PS-108
13/4/17

.....2